Akashvani : Bangalore
National Bulletin In Kannada
09.03.2025 / 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<><*<><>*><>

ಮುಖ್ಯಾಂಶಗಳು

೧. ಮಾರಿಷಸ್‌ಗೆ ನಾಳೆಯಿಂದ ಎರಡು ದಿನಗಳ ಪ್ರವಾಸ ಕೈಗೊಳ್ಳಲಿರುವ ಪ್ರಧಾನಿ ನರೇಂದ್ರ ಮೋದಿ

೨. ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಭಾಗ ನಾಳೆ ಆರಂಭ

೩. ಭಾರತ-ಬ್ರಿಟನ್ ಸಂಬಂಧ ವೃದ್ಧಿಯಲ್ಲಿ ವ್ಯಾಪಕ ಅವಕಾಶಗಳಿವೆ -ಸಚಿವ ಡಾ.ಎಸ್.ಜೈಶಂಕರ್

೪. ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿ; ಫೈನಲ್ ಪಂದ್ಯದಲ್ಲಿ ಇಂದು ಭಾರತ- ನ್ಯೂಜಿಲೆಂಡ್ ಮುಖಾಮುಖಿ

<><*<><>*><>

ಪ್ರಧಾನಿ ನರೇಂದ್ರ ಮೋದಿ ನಾಳೆಯಿಂದ ಮಾರಿಷಸ್‌ಗೆ ಎರಡು ದಿನಗಳ ಪ್ರವಾಸ ಕೈಗೊಳ್ಳಲಿದ್ದಾರೆ. ನಾಡಿದ್ದು, ನಡೆಯಲಿರುವ ಮಾರಿಷಸ್ ರಾಷ್ಟ್ರೀಯ ದಿನದ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಪ್ರಧಾನಿ ಭೇಟಿಯ ಬಗ್ಗೆ ದೆಹಲಿಯಲ್ಲಿ ಮಾಹಿತಿ ನೀಡಿದ ವಿದೇಶಾಂಗ ವ್ಯವಹಾರಗಳ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಪ್ರವಾಸದ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ಮಾರಿಷಸ್ ಪ್ರಧಾನಿ ನವೀನ್ ರಾಮ್ ಗುಲಾಮ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಮಾರಿಷಸ್ ರಾಷ್ಟ್ರಪತಿ ಧರಮ್ ಬೀರ್ ಗೋಕುಲ್ ಅವರನ್ನೂ ಭೇಟಿಯಾಗಲಿದ್ದಾರೆ. ಮಾರಿಷಸ್ ಭಾರತದ ಸ್ನೇಹರಾಷ್ಟ್ರವಾಗಿದ್ದು, ಹಲವು ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಸಹಭಾಗಿತ್ವ ಹೊಂದಿವೆ. ಮಾರಿಷಸ್‌ನ ರಕ್ಷಣಾ ಹಾಗೂ ಸಮುದ್ರ ಭದ್ರತೆ ವಿಭಾಗದ ಸಾಮರ್ಥ್ಯ ವರ್ಧನೆಗೆ ಭಾರತ ನೆರವು ನೀಡಿದೆ ಎಂದು ಹೇಳಿದರು. ಮಾರಿಷಸ್ ರಾಷ್ಟ್ರೀಯ ದಿನದ ಕಾರ್ಯಕ್ರಮದಲ್ಲಿ ಭಾರತದ ನೌಕಾದಳದ ಒಂದು ಹಡಗು ಸೇರಿದಂತೆ ಭದ್ರತಾ ಪಡೆಗಳ ತುಕಡಿಗಳು ಪಾಲ್ಗೊಳ್ಳಲಿವೆ. ೨೦೧೫ರಲ್ಲಿ ಪ್ರಧಾನಿ ನರೇಂದ್ರ ಮೋದಿ ಮಾರಿಷಸ್ ಗೆ ಭೇಟಿ ನೀಡಿದ್ದರು.

<><*<><>*><>

ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಭಾಗ ನಾಳೆಯಿಂದ ಆರಂಭವಾಗಲಿದೆ. ಏಪ್ರಿಲ್ ೪ರವರೆಗೆ ನಡೆಯಲಿರುವ ಎರಡನೇ ಹಂತದ ಅಧಿವೇಶನದಲ್ಲಿ ಒಟ್ಟು ೨೦ ಸಭೆಗಳು ನಡೆಯಲಿವೆ. ಅಧಿವೇಶನದ ಅವಧಿಯಲ್ಲಿ ೨೦೨೫-೨೬ನೇ ಸಾಲಿನ ಅನುದಾನ ಬೇಡಿಕೆಗಳು ಹಾಗೂ ಸಂಬಂಧಿತ ವಿನಿಯೋಗ ಮಸೂದೆ ಕುರಿತು ಚರ್ಚೆ ನಡೆಯಲಿದೆ. ಇದಲ್ಲದೆ, ಬ್ಯಾಂಕಿಂಗ್ ಕಾನೂನುಗಳು ತಿದ್ದುಪಡಿ ವಿಧೇಯಕ, ಕರಾವಳಿ ಸಾಗಣೆ ವಿಧೇಯಕ ೨೦೨೪, ತ್ರಿಭುವನ್ ಸಹಕಾರಿ ವಿಶ್ವವಿದ್ಯಾಲಯದ ವಿಧೇಯಕ, ವಲಸೆ ಮತ್ತು ವಿದೇಶಿಯರ ವಿಧೇಯಕ ೨೦೨೫ ಮತ್ತು ರೈಲ್ವೆ ತಿದ್ದುಪಡಿ ವಿಧೇಯಕ ಸೇರಿದಂತೆ ಹಲವಾರು ಮಸೂದೆಗಳ ಮೇಲೆ ಚರ್ಚೆ ಸಾಧ್ಯತೆಯಿದೆ. ಸಂಸತ್ತಿನ ಬಜೆಟ್ ಅಧಿವೇಶನದ ಮೊದಲ ಭಾಗ, ಕಳೆದ ಜನವರಿ ೩೧ ರಿಂದ ಫೆಬ್ರವರಿ ೧೩ರವರೆಗೆ ನಡೆಸಲಾಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು ಸಂಸತ್ತಿನ ಉಭಯ ಸದನಗಳನ್ನುದ್ದೇಶಿಸಿ ಭಾಷಣ ಮಾಡಿದ್ದರು. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅಧಿವೇಶನದ ಮೊದಲ ಭಾಗದಲ್ಲಿ

ಕೇಂದ್ರ ಆಯ-ವ್ಯಯವನ್ನು ಮಂಡಿಸಿದ್ದರು. ಮೊದಲ ಭಾಗದಲ್ಲಿ ಲೋಕಸಭೆ ಶೇಕಡ ೧೧೨ ರಷ್ಟು ಫಲಪ್ರದ ಕಲಾಪ ನಡೆಸಿದೆ ಎಂದು ದಾಖಲಾಗಿದೆ.

<><*<><>*><>

ಭಾರತವು ಜಗತ್ತನ್ನು ವಿಶ್ವಾಸದಿಂದ ನೋಡುತ್ತದೆ ಮತ್ತು ವ್ಯಾಪಾರ, ಚಲನಶೀಲತೆ, ಹೂಡಿಕೆ, ಪ್ರವಾಸೋದ್ಯಮ ಮತ್ತು ವಿದ್ಯಾರ್ಥಿಗಳ ತೊಡಗಿಸಿಕೊಳ್ಳುವಿಕೆಯನ್ನು ಉತ್ತೇಜಿಸುವ ವಿಷಯದಲ್ಲಿ ಹೆಚ್ಚಿನ ಸಾಧನೆ ಮಾಡಲು ಬಯಸುತ್ತದೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಹೇಳಿದ್ದಾರೆ.

ಯುಕೆಯ ಮ್ಯಾಂಚೆಸ್ಟರ್‌ನಲ್ಲಿ ನಿನ್ನೆ ಭಾರತೀಯ ಸಮುದಾಯ ಮತ್ತು ವ್ಯಾಪಾರ ನಾಯಕರೊಂದಿಗೆ ನಡೆದ ಸಂವಾದದ ಸಂದರ್ಭದಲ್ಲಿ ಡಾ.ಜೈಶಂಕರ್, ಭಾರತ-ಯುಕೆ ಸಂಬಂಧವು ಬೆಳೆಯಲು ಮತ್ತು ಆಳವಾಗಲು ಅಪಾರ ಸಾಮರ್ಥ್ಯವನ್ನು ಹೊಂದಿದೆ ಎಂದು ಸಚಿವರು ಹೇಳಿದರು.

<><*<><>*><>

ಜೇನು ಅಭಿಯಾನ ಯೋಜನೆಯಡಿ ಖಾದಿ ಮತ್ತು ಗ್ರಾಮೋದ್ಯೋಗ ಆಯೋಗದ ಅಧ್ಯಕ್ಷ ಮನೋಜ್ ಕುಮಾರ್ ಅವರು ೬ ರಾಜ್ಯಗಳಲ್ಲಿ ೨ ಸಾವಿರದ ೫೦ ಕ್ಕೂ ಹೆಚ್ಚು ಜೇನು ಪೆಟ್ಟಿಗೆಗಳು ಮತ್ತು ಪೂರಕ ಪರಿಕರಗಳನ್ನು ವಿತರಿಸಿದರು.

ದೆಹಲಿಯ ಕೆವಿಐಸಿಯ ರಾಜ್‌ಘಾಟ್ ಕಚೇರಿಯಿಂದ ವೀಡಿಯೊ ಕಾನ್ಫರೆನ್ಸ್ ಮೂಲಕ ೨೦೫ ಜೇನುಸಾಕಣೆದಾರರಿಗೆ ಟೂಲ್‌ಕಿಟ್‌ಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಕೆವಿಐಸಿ ಅಧ್ಯಕ್ಷರು, ಹಳ್ಳಿಗಳಲ್ಲಿ 'ಸಿಹಿ ಕ್ರಾಂತಿ'ಯನ್ನು ಹರಡುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಅನುಗುಣವಾಗಿ, ಜೇನುಸಾಕಣೆದಾರರ ಶ್ರೇಯೋಭಿವೃದ್ಧಿಗಾಗಿ 'ಜೇನು ಅಭಿಯಾನ' ಪ್ರಾರಂಭಿಸಲಾಗಿದೆ. ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾಕುಂಭ ಮೇಳದ ಸಮಯದಲ್ಲಿ ೧೨ ಕೋಟಿ ರೂಪಾಯಿಗಳಿಗೂ ಹೆಚ್ಚು ಖಾದಿ ಉತ್ಪನ್ನಗಳ ಮಾರಾಟವಾಗಿದು, ಇದೊಂದು ಐತಿಹಾಸಿಕ ದಾಖಲೆಯಾಗಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಭಾರತವು ಹೊಸ ಯುಗಕ್ಕೆ ಸಾಕ್ಷಿಯಾಗುತ್ತಿದೆ, ಅಲ್ಲಿ ಮಹಿಳೆಯರು ತಳಮಟ್ಟದ ಪ್ರಜಾಪ್ರಭುತ್ವದಿಂದ ಹಿಡಿದು ಅಧಿಕಾರದ ಅತ್ಯುನ್ನತ ಸ್ಥಾನಗಳವರೆಗೆ ಪ್ರತಿಯೊಂದು ಹಂತದಲ್ಲೂ ನಾಯಕತ್ವದ ಪಾತ್ರಗಳನ್ನು ವಹಿಸಿಕೊಳ್ಳುತ್ತಿದ್ದಾರೆ ಎಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಹೇಳಿದ್ದಾರೆ. ಅಂತಾರರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಸಂಸತ್ ಭವನದಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಮಾತನಾಡಿದ ಓಂ ಬಿರ್ಲಾ, ದೇಶ ಭಾರತೀಯ ಸಂವಿಧಾನದ ೭೫ನೇ ವರ್ಷಾಚರಣೆಯಲ್ಲಿದೆ. ಈ ಸಂದರ್ಭದಲ್ಲಿ, ಸಂವಿಧಾನ ಸಭೆಯ ೧೫ ಮಹಿಳಾ ಸದಸ್ಯರ ಅಪಾರ ಕೊಡುಗೆಗಳನ್ನು ಗುರುತಿಸುವುದು ಅಗತ್ಯ ಎಂದು ಒತ್ತಿ ಹೇಳಿದರು.

ಅವರ ದೃಷ್ಟಿಕೋನ ಮತ್ತು ಸಮರ್ಪಣೆ ಭಾರತದ ಪ್ರಜಾಪ್ರಭುತ್ವ ಚೌಕಟ್ಟನ್ನು ರೂಪಿಸಲು ಸಹಾಯ ಮಾಡಿತು, ಲಿಂಗ ಸಮಾನತೆ, ಎಲ್ಲರನ್ನೂ ಒಳಗೊಂಡ ಆಡಳಿತ ಮತ್ತು ಮಹಿಳಾ ಸಬಲೀಕರಣಕ್ಕೆ ಅಡಿಪಾಯ ಹಾಕಿತು ಎಂದು ಅವರು ಹೇಳಿದರು. ಮಹಿಳೆಯರ ಕೊಡುಗೆಗಳು ರಾಷ್ಟ್ರಕ್ಕೆ ಸ್ಫೂರ್ತಿ ನೀಡುತ್ತಲೇ ಇರುತ್ತವೆ ಮತ್ತು ಭವಿಷ್ಯದ ಪೀಳಿಗೆಗೆ ಮಾರ್ಗದರ್ಶಕ ಶಕ್ತಿಯಾಗಿ ಕಾರ್ಯನಿರ್ವಹಿಸುತ್ತವೆ. ಸಮಾಜ ಮತ್ತು ರಾಷ್ಟ್ರಕ್ಕೆ ಅವರ ಅಪ್ರತಿಮ ಸೇವೆಗಾಗಿ 'ಮಾತೃ ಶಕ್ತಿ'ಗೆ ಕೃತಜ್ಞತೆ ಸಲ್ಲಿಸಲು ಅಂತರರಾಷ್ಟ್ರೀಯ ಮಹಿಳಾ ದಿನವು ಒಂದು

ಸಂದರ್ಭವಾಗಿದೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ, ಲೋಕಸಭಾ ಸ್ಪೀಕರ್ ಸಂಸತ್ ಭವನ ಸಂಕೀರ್ಣದಲ್ಲಿ ಸಂವಿಧಾನ ಸಭೆಯ ಮಹಿಳಾ ಸದಸ್ಯರ ಕುರಿತಾದ ಪ್ರದರ್ಶನವನ್ನು ಉದ್ಘಾಟಿಸಿದರು.

ಧ್ವನಿ: ಓಂ ಬಿರ್ಲಾ, ಸ್ಪೀಕರ್ ( ೨೩ ಸೆಕೆಂಡ್‌ಗಳು)

<><*<><>*><>

ಕಲ್ಯಾಣ ಕರ್ನಾಟಕದ ೩೮ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆಯ ಮಾದರಿಯಲ್ಲಿ ಒಂದು ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ೧ ಸಾವಿರದ ೧೬೬ ಕಿಲೋ ಮೀಟರ್ ಉದ್ದದ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಕಲ್ಯಾಣ ಪಥ ಯೋಜನೆಗೆ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಕರ್ನಾಟಕದ ಕಲಬುರಗಿಯಲ್ಲಿ ನಿನ್ನೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, ರಾಜ್ಯದಲ್ಲಿ ಯಾವುದೇ ಯೋಜನೆಗಳನ್ನು ಆರಂಭಿಸಿದ್ದರೂ, ಅವುಗಳನ್ನು ಕಲ್ಯಾಣ ಕರ್ನಾಟಕದಿಂದಲೇ ಆರಂಭಿಸಿ, ಇಲ್ಲಿಂದ ಆರಂಭವಾಗುವ ಯೋಜನೆಗಳು ರಾಜ್ಯದ ಮೂಲೆ ಮೂಲೆಗೂ ತಲುಪಲಿವೆ . ಕಲ್ಯಾಣಪಥ ಯೋಜನೆಯ ಕ್ರಾಂತಿಕಾರಿ ಹೆಜ್ಜೆಯಾಗಿದೆ ಎಂದು ಹೇಳಿದರು. ರಾಜ್ಯದಲ್ಲಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಒಗ್ಗಟ್ಟಿನಿಂದ ಅಭಿವೃದ್ಧಿಯ ಕಡೆಗೆ ಗಮನಹರಿಸಬೇಕು. ಆಗ ಮಾತ್ರ ಜನರಿಗೆ ನೀಡಿದ್ದ ಭರವಸೆಗಳನ್ನು ಈಡೇರಿಸಲು ಸಾಧ್ಯ . ಯುಪಿಎ ಸರ್ಕಾರದ ಅವಧಿಯಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ೩೭೧ ಜೆ ಕಲಂ ತಿದ್ದುಪಡಿ ತರುವ ಮೂಲಕ ಈ ಭಾಗದ ಅಭಿವೃದ್ಧಿಗೆ ಆದ್ಯತೆ ನೀಡಲಾಗಿತ್ತು. ಅಪೌಷ್ಠಿಕತೆ ಹೆಚ್ಚಿರುವ ಪ್ರದೇಶದಲ್ಲಿ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ತಿಳಿಸಿದರು.

<><*<><>*><>

ಭಾರತ, ತನ್ನ ನೆರೆಹೊರೆ ದೇಶಗಳೊಂದಿಗೆ ಆರೋಗ್ಯಕರ ಸಂಬಂಧ ಕಾಪಾಡಿಕೊಳ್ಳಲು ಬಲವಾಗಿ ಪ್ರತಿಪಾದಿಸುತ್ತದೆ. ಬಾಂಗ್ಲಾದೇಶವು ಇದಕ್ಕೆ ಹೊರತಾಗಿಲ್ಲ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ಸುದ್ದಿಸಂಸ್ಥೆವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ಮಾಜಿ ಪ್ರಧಾನಿ ಅಟಲ್‌ಬಿಹಾರಿ ವಾಜಪೇಯಿ ಅವರು, ನಾವು ಸ್ನೇಹಿತರನ್ನು ಬದಲಾಯಿಸಬಹುದು. ಆದರೆ, ನೆರೆಹೊರೆಯವರನ್ನಲ್ಲ ಎಂದು ನೀಡಿದ್ದ ಹೇಳಿಕೆಯನ್ನು ಉಲ್ಲೇಖಿಸಿ ಭಾರತ ಸದಾ ತನ್ನ ನೆರೆಹೊರೆಯವರೊಂದಿಗೆ ಉತ್ತಮ ಸಂಬಂಧ ಕಾಪಾಡಿಕೊಳ್ಳಲು ಪ್ರಯತ್ನಿಸುತ್ತದೆ ಎಂದು ಹೇಳಿದರು.

<><*<><>*><>

'ಪತಂಜಲಿ ಮೆಗಾ ಆಹಾರ ಮತ್ತು ಗಿಡಮೂಲಿಕೆ ಉದ್ಯಾನವನ'ವನ್ನು ಇಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಮತ್ತು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರು ನಾಗ್ಪುರದ ಮಿಹಾನ್ ಪ್ರದೇಶದ ವಿಶೇಷ ಆರ್ಥಿಕ ವಲಯದಲ್ಲಿ ಉದ್ಘಾಟಿಸಲಿದ್ದಾರೆ. ಈ ಸೌಲಭ್ಯವು ಪತಂಜಲಿ ಸ್ಥಾಪಿಸಿದ ಏಷ್ಯಾದ ಅತಿದೊಡ್ಡ ಕಿತ್ತಳೆ ಸಂಸ್ಕರಣಾ ಘಟಕವಾಗಲಿದೆ ಎಂದು ಪತಂಜಲಿ ಆಯುರ್ವೇದ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಆಚಾರ್ಯ ಬಾಲಕೃಷ್ಣ ಅವರು ಹೇಳಿದ್ದಾರೆ. ಈ ಘಟಕವು ವಿದರ್ಭ ಪ್ರದೇಶದಲ್ಲಿ ಬೆಳೆಯುವ ವಿವಿಧ ಪ್ರಕಾರದ ಕಿತ್ತಳೆ ತಳಿಗಳು ಒಳಗೊಂಡಂತೆ ದಿನಕ್ಕೆ ೮೦೦ ಟನ್ ಸಿಟ್ರಸ್ ಹಣ್ಣುಗಳನ್ನು ಸಂಸ್ಕರಿಸುವ ಸಾಮರ್ಥ್ಯವನ್ನು ಹೊಂದಿರುತ್ತದೆ.

ಕಿತ್ತಳೆ ರಸಕ್ಕಾಗಿ ಸಿಟ್ರಸ್ ಹಣ್ಣುಗಳನ್ನು ಸಂಸ್ಕರಿಸುವುದರ ಜೊತೆಗೆ, ಕಿತ್ತಳೆ ಸಿಪ್ಪೆಗಳಿಂದ ತಯಾರಿಸಿದ ಸೌಂದರ್ಯವರ್ಧಕಗಳು ಮತ್ತು ಕಿತ್ತಳೆ ತಿರುಳಿನಿಂದ ತಯಾರಿಸಿದ ಕಿತ್ತಳೆ ಮಿಠಾಯಿ ಸೇರಿದಂತೆ ಇತರೆ ಉಪ-ಉತ್ಪನ್ನಗಳನ್ನೂ ಸಹ ತಯಾರಿಸಲಾಗುತ್ತದೆ.

<><*<><>*><>

ದುಬೈ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಫೈನಲ್‌ನಲ್ಲಿ ಭಾರತ - ನ್ಯೂಜಿಲೆಂಡ್ ಮುಖಾಮುಖಿಯಾಗಲಿವೆ. ಯಾವ ತಂಡ ಪ್ರಶಸ್ತಿ ಮುಡಿಗೇರಿಸಿಕೊಳ್ಳಲಿದೆ ಎಂಬ ಕದನ ಕುತೂಹಲ ಮನೆ ಮಾಡಿದೆ. ಭಾರತ ಕ್ರಿಕೆಟ್ ತಂಡದ ಉಪನಾಯಕ ಶುಭಮನ್ ಗಿಲ್ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಾವು ಐಸಿಸಿ ಪ್ರಶಸ್ತಿಯನ್ನು ಗೆದ್ದಿದ್ದು, ಇಂದು ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಯನ್ನು ಗೆಲ್ಲಲು ನಮ್ಮ ಕೈಲಾದಷ್ಟು ಪ್ರಯತ್ನಿಸುತ್ತೇವೆ ಎಂದು ಆಶಯ ವ್ಯಕ್ತಪಡಿಸಿದರು. ಭಾರತದ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಉತ್ತಮ ಫಾರ್ಮ್‌ನಲ್ಲಿದ್ದು, ಪ್ರಶಸ್ತಿ ಗೆಲ್ಲಲು ನೆಚ್ಚಿನ ಆಟಗಾರರ ಬಳಗವನ್ನು ಒಳಗೊಂಡಿದೆ. ಶುಭಮನ್ ಗಿಲ್ ಕೂಡ ಈ ಟೂರ್ನಿಯಲ್ಲಿ ಉತ್ತಮ ಪ್ರದರ್ಶನ ನೀಡುತ್ತಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨.೩೦ ಕ್ಕೆ ಆರಂಭವಾಗಲಿದೆ.

<><*<><>*><>

ಫ್ರಾನ್ಸ್‌ನ ಓರ್ಲಿಯನ್ಸ್ ನಗರದಲ್ಲಿ ನಡೆದ ಓರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಸಿಂಗಲ್ಸ್ ಸೆಮಿಫೈನಲ್ಸ್ ನಲ್ಲಿ ಭಾರತದ ಆಯುಷ್ ಶೆಟ್ಟಿ ಪರಾಭವಗೊಂಡರು.

ಅವರು ತೈವಾನ್‌ನ ಲಿನ್ ಚುನ್-ಯಿ ವಿರುದ್ಧ ೧೩-೨೧, ೧೫-೨೧ ಅಂತರದಲ್ಲಿ ಸೋಲುಂಡರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>